4. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು ಈ ಮೂಲಕ ಸ್ತ್ರೀ ರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.
5. ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ 5021 ಅರೆವೈದ್ಯಕೀಯ ಹುದ್ದೆಗಳನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಅದು ಪೂರ್ಣಗೊಂಡ ನಂತರ ಆದ್ಯತಾನುಸಾರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು.
6. ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ 562 ವೈದ್ಯರ ಹಾಗೂ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದೆ.
7. ಪ್ರಸ್ತುತ ಗ್ರೂಪ್–ಡಿ ನೌಕರರ ವೃಂದದಲ್ಲಿ ನೇಮಕಾತಿ ಮಾಡಲು ನಿಷೇಧವಿದ್ದು, ಅವಶ್ಯವಿರುವೆಡೆ ಬಾಹ್ಯ ಮೂಲಗಳಿಂದ ಸೇವೆ ಪಡೆದು ನಿರ್ವಹಿಸಲು ಕ್ರಮವಹಿಸಲಾಗಿದೆ.

ಸಮುದಾಯ ಭವನದ ಸೌಲಭ್ಯವನ್ನು ಎಲ್ಲಾ ನೇಕಾರ ಒಳ ಪಂಗಡಗಳಿಗೂ ಪೂರೈಸುವ ಕುರಿತು.

461 (938) ಶ್ರೀ ಸಿದ್ದು ಸವದಿ (ತೇರದಾಳ್) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿಂದುಳಿದ ವರ್ಗಗಳಡಿಯಲ್ಲಿ ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ನೇಕಾರ ಸಮುದಾಯಕ್ಕೆ ದೇವಾಂಗ ಸಮುದಾಯ ಭವನ ಅಂತ ಹೆಸರಿನಿಂದ ರೂ.5 ಲಕ್ಷದವರೆಗೆ ಸೌಲಭ್ಯ ಒದಗಿಸುತ್ತಿರುವುದು ತಮ್ಮ ಗಮನಕ್ಕೆ ಬಂದಿದೆಯೇ;

ಆ) 2009–10ನೇ ಎಷ್ಟು ಸಮುದಾಯ ಭವನಗಳಿಗೆ ಆರ್ಥಿಕ ಸೌಲಭ್ಯ ಕೊಡಲಾಗಿದೆ, ಅವುಗಳಲ್ಲಿ ಯಾವ ಯಾವ ಪಂಗಡಗಳ ನೇಕಾರರಿಗೆ ಕೊಡಲಾಗಿದೆ;

ಇ) ನೇಕಾರರಲ್ಲಿಯೇ ಅತ್ಯಂತ ಹೆಚ್ಚಿನ ಸಂಖ್ಯೆಯಲ್ಲಿರುವ ಕುರುವಿನಶೆಟ್ಟಿ ಅಂತ ಉಪಪಂಗಡವಿದ್ದು ಅವರುಗಳಿಗೆ ಸಮುದಾಯ ಭವನ ಮತ್ತು ವಿದ್ಯಾರ್ಥಿ ವೇತನಗಳನ್ನು ಕೊಡದೇ ಇರುವುದು ತಮ್ಮ ಗಮನಕ್ಕೆ ಇದೆಯೇ;

ಈ) ಇದ್ದಲ್ಲಿ ಕಾಲಂ. ನಂ–4 ರಲ್ಲಿ ದೇವಾಂಗ/ಕುರುವಿನ ಶೆಟ್ಟಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮತ್ತು ಸಮುದಾಯ ಭವನಗಳಿಗೆ ಸೌಲಭ್ಯ ಅಂತಾ ಮಾರ್ಪಾಡು ಮಾಡಲಾಗುವುದೇ?

ಶ್ರೀ ಡಿ ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ದೇವಾಂಗ ಸಮಾಜದವರಿಗೆ ಸಮುದಾಯ ಭವನ/ ವಿದ್ಯಾರ್ಥಿನಿಲಯದ ಕಟ್ಟಡ ನಿರ್ಮಾಣಕ್ಕಾಗಿ ರೂ.5.00 ಲಕ್ಷಗಳನ್ನು ಮಂಜೂರು ಮಾಡುವ ಕಾರ್ಯಕ್ರಮ ಇರುತ್ತದೆ.

ಆ) 2009–10ನೇ ಸಾಲಿನಲ್ಲಿ ಒಟ್ಟು 29 ದೇವಾಂಗ ಸಮುದಾಯ ಭವನ ಹಾಗೂ ವಿದ್ಯಾರ್ಥಿನಿಲಯಗಳ ಕಟ್ಟಡಗಳ ನಿರ್ಮಾಣಕ್ಕೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ನೇಕಾರ ಇತರ ಪಂಗಡಗಳಿಗೆ ಸಮುದಾಯ ಭವನಗಳ ಕಟ್ಟಡ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಿರುವುದಿಲ್ಲ.

ಇ) ಮತ್ತು ಈ)

2009–10 ನೇ ಕುರುಹಿನ ಶೆಟ್ಟಿ ಸಮಾಜದವರು ಹಾಸನ ನಗರದಲ್ಲಿ ನಿರ್ಮಿಸುವ ಸಮುದಾಯ ಭವನಕ್ಕೆ ರೂ.5.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಈ ಸಮಾಜದವರ ಅರ್ಹ ವಿದ್ಯಾರ್ಥಿಗಳಿಗೆ ಹಣದ ಲಭ್ಯತೆ, ಆದಾಯ ಮತ್ತು ಮೆರಿಟ್ ಆಧಾರದ ಮೇಲೆ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನವನ್ನು ಜಿಲ್ಲೆಗಳಲ್ಲಿ ಮಂಜೂರು ಮಾಡಲಾಗುತ್ತಿದೆ.

ಭಾಗ್ಯಲಕ್ಷ್ಮಿ ಬಾಂಡ್ ಸೌಲಭ್ಯದಿಂದ ವಂಚಿತರಾದ ಬಡ ಮಕ್ಕಳಿಗೂ ಸೌಲಭ್ಯ

462 (939) ಶ್ರೀ ಸಿದ್ದು ಸವದಿ (ತೇರದಾಳ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭಾಗ್ಯಲಕ್ಷ್ಮಿ ಬಾಂಡ್ ಯೋಜನೆ ಯಾವಾಗಿನಿಂದ ಪ್ರಾರಂಭಿಸಲಾಯಿತು, ಇಲ್ಲಿಯವರೆಗೆ ರಾಜ್ಯದಲ್ಲಿ ಎಷ್ಟು ಮಕ್ಕಳಿಗೆ ಭಾಂಡ್ ವಿತರಿಸಲಾಗಿದೆ, ಪ್ರತಿ ವರ್ಷ ಬಾಂಡ್ ವಿತರಣೆ ಮಾಡಿದ ಮಾಹಿತಿಯನ್ನು ಯೋಜನೆ ಪ್ರಾರಂಭದ ದಿನದಿಂದ ನೀಡುವುದು;